ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್**

**ನಿರ್ಮಲ ಭಾರತ್ ಅಭಿಯಾನ**

ಸಂಖ್ಯೆ : ಗ್ರಾಅಪ/ರಾನೀನೈಮಿ/ಎನ್‌ಬಿಎ/ಸುತ್ತೋಲೆ-22/2013-14 ದಿನಾಂಕ :09.07.2013

# ಸುತ್ತೋಲೆ

***ವಿಷಯ:*** ಜಿಲ್ಲೆಯಲ್ಲಿ ಈಗಾಗಲೇ ಲಭ್ಯವಿರುವ ವೈಯಕ್ತಿಕ ಶೌಚಾಲಯ, ಶಾಲೆ ಮತ್ತು ಅಂಗನವಾಡಿ ಶೌಚಾಲಯಗಳ ಮಾದರಿಗಳನ್ನು ಪ್ರದರ್ಶಿಸುವ ಕುರಿತು.

- - -

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಿರ್ಮಲ ಭಾರತ್ ಅಭಿಯಾನ ಕಾರ್ಯಕ್ರಮವು 2005, ಅಕ್ಟೋಬರ್‌ನಿಂದ ರಾಜ್ಯವ್ಯಾಪಿ ಎಲ್ಲಾ ಗ್ರಾಮೀಣ ಕುಟುಂಬಗಳು ಶೌಚಾಲಯ ಹೊಂದುವಂತೆ ಜನರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಆದರೂ ನಿಗದಿತ ಪ್ರಮಾಣದಲ್ಲಿ ಪ್ರಗತಿ ಸಾಧಿಸಲು ಸಾಧ್ಯವಾಗಿಲ್ಲ. ಈ ದಿಸೆಯಲ್ಲಿ ಜನರಲ್ಲಿ ಶೌಚಾಲಯಗಳ ಮಾದರಿಗಳ ಬಗ್ಗೆ ಅರಿವು ಮೂಡಿಸುವ ಅವಶ್ಯಕತೆಯೂ ಸಹ ಇದೆ. ಭೌಗೋಳಿಕ ಪ್ರದೇಶಗಳಿಗನುಗುಣವಾಗಿ ಶೌಚಾಲಯಗಳನ್ನು ರಾಜ್ಯದಾದ್ಯಂತ ವಿವಿಧ ಮಾದರಿಗಳಲ್ಲಿ ನಿರ್ಮಿಸಲಾಗುತ್ತಿದೆ. ಆದರೆ ಜನರಿಗೆ ಶೌಚಾಲಯಗಳನ್ನು ನಿರ್ಮಿಸುವಾಗ ಸರಿಯಾದ ಮಾದರಿಗಳ ಮಾಹಿತಿ ನೀಡದೇ ಇರುವುದರಿಂದ ನಿರ್ಮಿಸಿಕೊಂಡ ಶೌಚಾಲಯಗಳು ಕೆಲವೇ ದಿನಗಳಲ್ಲಿ ನಿರುಪಯುಕ್ತವಾಗುತ್ತಿರುವುದು ಕಂಡುಬಂದಿರುತ್ತದೆ. ಆದ್ದರಿಂದ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ವೈಯಕ್ತಿಕ ಶೌಚಾಲಯ, ಶಾಲೆ ಮತ್ತು ಅಂಗನವಾಡಿ ಶೌಚಾಲಯಗಳ ಮಾದರಿಗಳನ್ನು ಪ್ರದರ್ಶಿಸುವ ಮೂಲಕ ಜನರಲ್ಲಿ ಸುಸ್ಥಿರ ಶೌಚಾಲಯ ನಿರ್ಮಿಸಿಕೊಳ್ಳಲು ಅರಿವು ಮೂಡಿಸಬೇಕಾಗಿದೆ.

ಈ ಹಿನ್ನೆಲೆಯಲ್ಲಿ ಪ್ರತಿ **ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿ ಕಛೇರಿಯ ಆವರಣದಲ್ಲಿ ಶೌಚಾಲಯಗಳ ಮಾದರಿಗಳನ್ನು** ಪ್ರದರ್ಶಿಸಲು ಸ್ಥಳಾವಕಾಶವನ್ನು ನಿಗದಿಪಡಿಸಿ ಮಾದರಿಗಳನ್ನು ಪ್ರದರ್ಶಿಸಲು ಕೂಡಲೇ ಕ್ರಮವಹಿಸುವುದು. ಈ ಕಾರ್ಯಕ್ರಮ ರಾಜ್ಯದ ಐಇಸಿ ಕಾರ್ಯಕ್ರಮವಾಗಿರುತ್ತದೆ. ಜಿಲ್ಲಾವಾರು ತೆಗೆದುಕೊಂಡ ಕ್ರಮದ ಬಗ್ಗೆ ದಿನಾಂಕ 27.07.2013ರೊಳಗೆ ಪೋಟೋಸಹಿತ ವರದಿಯನ್ನು ತಪ್ಪದೇ ಈ ಕಛೇರಿಗೆ ಸಲ್ಲಿಸುವುದು.

**(ಡಾ.ಜೆ.ರವಿಶಂಕರ್)**
ಮಿಷನ್ ನಿರ್ದೇಶಕರು,
ರಾ.ನೀ.ನೈ.ಮಿಷನ್ ಹಾಗೂ ಸರ್ಕಾರದ
ಪದನಿಮಿತ್ತ ಜಂಟಿ ಕಾರ್ಯದರ್ಶಿಗಳು,
ಗ್ರಾ ಅ ಮತ್ತು ಪಂಚಾಯತ್ ರಾಜ್ ಇಲಾಖೆ

**ರವರಿಗೆ:**

ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
ಎಲ್ಲಾ ಜಿಲ್ಲಾ ಪಂಚಾಯತ್‌ಗಳು.

**ಪ್ರತಿಯನ್ನು :-**

1. ಪ್ರಧಾನ ಕಾರ್ಯದರ್ಶಿಗಳವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಪ್ರಧಾನ ಕಾರ್ಯದರ್ಶಿಗಳ ಗಮನಕ್ಕೆ ತರಲು.
2. ಕಾರ್ಯದರ್ಶಿಗಳವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಕಾರ್ಯದರ್ಶಿಗಳ ಗಮನಕ್ಕೆ ತರಲು.

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.
ದೂರವಾಣಿ ಸಂ.22221861/62 : ಫ್ಯಾಕ್ಸ್ :-22221862 E-mail : wsrdpr@gmail.com RP